**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂಖ್ಯೆ: ಸಿಟಿಇ 06 ಡಿವಿಪಿ (1) 2024

ಆಯುಕ್ತರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು- 560 001.
ದಿನಾಂಕ: 18.03.2025

**ಅಧಿಕೃತ ಜ್ಞಾಪನ**

**ವಿಷಯ:** 2024-25 ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಉಲ್ಲೇಖ:**
1. ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಹೆಚ್‌ಪಿಟಿ 2024, ದಿನಾಂಕ 04.04.2024, ದಿನಾಂಕ 25.09.2024, ದಿನಾಂಕ 29.10.2024, ದಿ:10.01.2025, ದಿ:10.02.2025.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 25 ಹೆಚ್‌ಪಿಟಿ 2025, ದಿನಾಂಕ 18.03.2025,

*********

ಮೇಲೆ ನಮೂದಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರ ಸರ್ಕಾರದ ಆದೇಶಗಳಲ್ಲಿ 2024-25 ನೇ ಆರ್ಥಿಕ ಸಾಲಿಗೆ ಶಿಕ್ಷಣ ಇಲಾಖೆಯ ಉನ್ನತ ಶಿಕ್ಷಣ ವಲಯದಡಿ ಬರುವ ತಾಂತ್ರಿಕ ಶಿಕ್ಷಣಕ್ಕೆ (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿ ಮುಂದುವರಿದ ಕಾರ್ಯಕ್ರಮಗಳನ್ನು ಮುಂದುವರಿಸಲು ಮತ್ತು ಅನುಷ್ಠಾನಗೊಳಿಸಲು ಅನುಮತಿ ನೀಡಿ ಮೊದಲನೇ, ಎರಡನೇ, ಮೂರನೇ ಮತ್ತು ನಾಲ್ಕನೇ ಕಂತಿನ ಅನುದಾನವನ್ನು ಬಿಡುಗಡೆ ಸರ್ಕಾರ ಆದೇಶಿಸಿದೆ.

ಉಲ್ಲೇಖ(2) ರ ಸರ್ಕಾರಿ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವದನ ಪಾವತಿಸಲು ರೂ.3390.28(ರೂಪಾಯಿ ಮೂವತ್ತ ಮೂರು ಕೋಟಿ ತೊಂಬತ್ತು ಲಕ್ಷದ ಇಪ್ಪತ್ತೆಂಟು ಸಾವಿರ ಮಾತ್ರ) ಗಳ ಅನುದಾನವನ್ನು ಮರುಹೆಂದಾಣಿಕೆ ಮೂಲಕ ಅನುದಾನವನ್ನು ಒದಗಿಸಿ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಆದುದರಿಂದ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಹೆಚ್ಚುವರಿ ಭೋಧನಾ ಕಾರ್ಯಭಾರವನ್ನು ನಿರ್ವಹಿಸಲು ನೇಮಕ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಗೌರವ ಧನ ಪಾವತಿಸಲು 2024-25 ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2203-00-105-0-01-324 ಗೌರವಧನ ದಡಿ ರೂ.88,00,000/- (ರೂಪಾಯಿ ಎಂಬತ್ತೆಂಟು ಲಕ್ಷ ಮಾತ್ರ) ಗಳನ್ನು ಈ ಕೆಳಗಿನ ಕೋಷ್ಟಕದಂತೆ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಲಾಗಿದೆ

ರೂಗಳಲ್ಲಿ

| ಕ್ರ ಸಂ | ಸಂಸ್ಥೆ | ಡಿಡಿಓ | 324 |
|---|---|---|---|
| 1 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭದ್ರಾವತಿ | 33240O | 14,00,000 |
| 2 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಮಂಗಳೂರು | 33257O | 15,00,000 |

| | | | |
|---|---|---|---|
| 3 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 33277O | 19,00,000 |
| 4 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 33297O | 17,00,000 |
| 5 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಕಲಬುರ್ಗಿ | 33301O | 13,00,000 |
| 6 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 33305O | 10,00,000 |
| | | **ಒಟ್ಟು** | 88,00,000 |

ಪ್ರಸ್ತುತ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಆಯುಕ್ತಾಲಯದಿಂದ ಅನುಮೋದನೆ ಪಡೆದಿರುವ ಅತಿಥಿ ಉಪನ್ಯಾಸರುಗಳಿಗೆ ಮಾತ್ರ ಪ್ರಸಕ್ತ ಆರ್ಥಿಕ ವರ್ಷದಲ್ಲಿ 10 ಮಾಹೆಗಳಿಗೆ ಕಡ್ಡಾಯವಾಗಿ ಗೌರವ ಧನ ಪಾವತಿಸಲು ಕ್ರಮ ವಹಿಸಬೇಕೆಂದು ಆದೇಶಿಸಲಾಗಿದೆ. ಈ ಅನುದಾವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದಿಯೋ ಅದೇ ಉದ್ದೇಶಕ್ಕೆ ಬಳಸಿ ವೆಚ್ಚ ಮಾಡಿ ಬಳಕೆ ಪ್ರಮಾಣ ಪತ್ರ (Utilization Certificate) ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

Digitally signed by
MANJUSHREE N
Date: 19-03-2025
11:55:41

**ಆಯುಕ್ತರು**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ.**

**ಇವರಿಗೆ:**

ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಪ್ರತಿ:**

1. ಜಂಟಿ ನಿರ್ದೇಶಕರು, ಆಡಳಿತ ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ
2. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು- ಇವರ ಮಾಹಿತಿಗಾಗಿ
3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ
4. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ
5. ಲೆಕ್ಕಾಧಿಕಾರಿಗಳು (ಬಿಲ್ಸ್)
6. ನಗದು ವಿಭಾಗದ ಅಧೀಕ್ಷಕರು / ಕಾರ್ಯನಿರ್ವಾಹಕರು
7. ಆಕ್ಶಿವೇಷನ್ ಕಡತಕ್ಕೆ.